# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ಸಂಗಪ್ಪ ಶಿವನಪ್ಪ ರೊಡ್ಡಣ್ಣವರ್, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಸುಣದೋಳ ಗ್ರಾಮ ಪಂಚಾಯತಿ, ಗೋಕಾಕ್ ತಾಲ್ಲೂಕು, ಬೆಳಗಾವಿ ಜಿಲ್ಲೆ ಹಾಗೂ ಶ್ರೀ ಎಂ.ಆರ್.ಕುಲಕರ್ಣಿ, ಸಹಾಯಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಗೋಕಾಕ್ ಇವರುಗಳ ವಿರುದ್ಧ ಶಿಸ್ತು ಕ್ರಮ - ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರವರಿಗೆ ವಹಿಸುವ ಬಗ್ಗೆ - ಆದೇಶ.

ಓದಲಾಗಿದೆ:-

1) ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು ಇವರ ಅರೆ ಸರ್ಕಾರಿ ಪತ್ರ ಸಂಖ್ಯೆ. Compt/ Uplok/ BGM/1137/2014/PP ದಿನಾಂಕ: 12.12.2016.

2) ಮಾನ್ಯ ಉಪ ಲೋಕಾಯುಕ್ತರವರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 12(3)ರಡಿಯಲ್ಲಿ ಸಲ್ಲಿಸಿರುವ ವರದಿ ಸಂಖ್ಯೆ Compt/ Uplok/ BGM/1137/2014/PP ದಿನಾಂಕ. 28.11.2016

-----

## ಪ್ರಸ್ತಾವನೆ

ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು ರವರು ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ 12.12.2016ರ ಪತ್ರದ ಜೊತೆ ಮಾನ್ಯ ಉಪಲೋಕಾಯುಕ್ತರವರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಸೆಕ್ಷನ್ 12 (3) ರನ್ವಯ ನೀಡಿರುವ ವರದಿಯನ್ನು ಸಂಬಂಧಿಸಿದ ದಾಖಲೆಗಳೊಂದಿಗೆ ಕಳುಹಿಸುತ್ತಾ, ಮಾನ್ಯ ಉಪ ಲೋಕಾಯುಕ್ತರವರ ಶಿಫಾರಸ್ಸಿನಂತೆ ಕ್ರಮವಹಿಸಲು ಕೋರಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರವರು ಲೋಕಾಯುಕ್ತ ಕಾಯ್ದೆ ಕಲಂ 12 (3)ರಂತೆ ಸಲ್ಲಿಸಿರುವ ವರದಿ ಹಾಗೂ ಲಗತ್ತಿಸಿರುವ ದಾಖಲೆಗಳನ್ನು ಪರಿಶೀಲಿಸಿದೆ. ಶ್ರೀ ಲಕ್ಷ್ಮಣ ಮಾಯಪ್ಪ ಅಲಕನೂರ, ಹೊನಕುಪ್ಪಿ ಗ್ರಾಮ, ಗೋಕಾಕ ತಾಲ್ಲೂಕು, ಬೆಳಗಾವಿ ಜಿಲ್ಲೆ ಇವರು 2013-14ನೇ ಸಾಲಿನ ನರೇಗಾ ಯೋಜನೆಯಡಿಯಲ್ಲಿ ಸುಣದೋಳ ಗ್ರಾಮ ಪಂಚಾಯತಿಯ ವ್ಯಾಪ್ತಿಗೆ ಬರುವ ಹೊನಕುಪ್ಪಿ ಗ್ರಾಮದಲ್ಲಿ ಹೆಚ್ಚುವರಿ ಕ್ರಿಯಾ ಯೋಜನೆಯಡಿ ಮಂಜೂರಾದ ಕಾಮಗಾರಿಗಳಲ್ಲಿ ಈ ಕೆಳಕಂಡವರು ಹಣ ದುರುಪಯೋಗಪಡಿಸಿಕೊಂಡಿರುತ್ತಾರೆಂದು ಕರ್ನಾಟಕ ಲೋಕಾಯುಕ್ತ ಕಚೇರಿಯಲ್ಲಿ ದೂರನ್ನು ಸಲ್ಲಿಸಿರುತ್ತಾರೆ:-

1. ಶ್ರೀಮತಿ ಗೀತಾ ಬಸಪ್ಪ ಗಂಗರೆಡ್ಡಿ, ಅಧ್ಯಕ್ಷರು, ಸುಣದೋಳ ಗ್ರಾಮ ಪಂಚಾಯತಿ.
2. ಶ್ರೀ ಸಂಗಪ್ಪ ಶಿವನಪ್ಪ ರೊಡ್ಡಣ್ಣವರ್, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಸುಣದೋಳ ಗ್ರಾಮ ಪಂಚಾಯತಿ.
3. ಶ್ರೀ ಎಂ.ಆರ್.ಕುಲಕರ್ಣಿ, ಸಹಾಯಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಗೋಕಾಕ್.

ಸದರಿ ದೂರಿಗೆ ಸಂಬಂಧಿಸಿದಂತೆ ಲೋಕಾಯುಕ್ತ ಕಚೇರಿಯು ತನಿಖೆ ಕೈಗೊಂಡು ಸಲ್ಲಿಸಿರುವ ತನಿಖಾ ವರದಿಯಲ್ಲಿ ಈ ಕೆಳಕಂಡ ಅಂಶಗಳು ವ್ಯಕ್ತವಾಗುತ್ತವೆ:-

1. ಹೊನಕುಪ್ಪಿ ಗ್ರಾಮದ ಶ್ರೀ ಲಕ್ಷ್ಮಣ ಮಾಯಪ್ಪ ಅಲಕನೂರ ಇವರ ತೋಟದ ಹತ್ತಿರ ಇರುವ ಕೆರೆ ಪುನಶ್ಚೇತನಗೊಳಸುವ ಕಾಮಗಾರಿಗೆ ಸಂಬಂಧಿಸಿದಂತೆ ದೂರುದಾರರು ತಮ್ಮ ಆಕ್ಷೇಪಣೆ ಇಲ್ಲವೆಂದು ತಿಳಸಿರುತ್ತಾರೆ.
2. ಸರ್ಕಾರಿ ಗಂಡು ಮಕ್ಕಳ ಶಾಲೆಯ ಮೈದಾನ ಅಭಿವೃದ್ಧಿಗೆ ಸಂಬಂಧಿಸಿದ ಕಾಮಗಾರಿಯು ಸುಸ್ಥಿತಿಯಲ್ಲಿರುತ್ತದೆ ಎಂದು ತಿಳಸಿರುತ್ತಾರೆ.
3. ಭೀಮಪ್ಪ ಮಾಯಪ್ಪ ಪುಗಶೆಟ್ಟಿ ಇವರ ಗುಡಿಹಳ್ಳದ ಹತ್ತಿರ ಚೆಕ್ ಡ್ಯಾಂ ಪುನಶ್ಚೇತನಗೊಳಸುವ ಕಾಮಗಾರಿಯು ಸುಸ್ಥಿತಿಯಲ್ಲಿರುತ್ತದೆ ಎಂದು ತಿಳಸಿರುತ್ತಾರೆ.
4. ಶ್ರೀ ಕೃಷ್ಣನ ಹನುಮಂತ ರಂಗರೆಡ್ಡಿ ಇವರ ಗುಡಿಹಳ್ಳದ ಹತ್ತಿರ ಚೆಕ್ ಡ್ಯಾಂ ಪುನಶ್ಚೇತನಗೊಳಸುವ ಕಾಮಗಾರಿಯನ್ನು ಕೈಗೊಂಡಿಲ್ಲವೆಂದು ಹಾಗೂ ಸದರಿ ಕಾಮಗಾರಿಗಾಗಿ ಯಾವುದೇ ರೀತಿಯ ಹಣ ವೆಚ್ಚ ಮಾಡಿಲ್ಲವೆಂದು ತಿಳಸಿರುತ್ತಾರೆ. ಕಾಂಕ್ರೀಟ್‌ನಿಂದ ನೆಲವನ್ನು ಸಮತಟ್ಟು ಮಾಡುವ ಕಾಮಗಾರಿಯಲ್ಲಿ ರೂ. 14,144/- ಗಳನ್ನು ಅನವಶ್ಯಕವಾಗಿ ಹೆಚ್ಚುವರಿಯಾಗಿ ಖರ್ಚು ಮಾಡಲಾಗಿದೆ ಎಂದು ತಿಳಸಿರುತ್ತಾರೆ. ಕಲ್ಲು ಕಟ್ಟಡದಿಂದ ನಿರ್ಮಿಸಿರುವ ಮೆಟ್ಟಿಲು ಕಾಮಗಾರಿಯಯಲ್ಲಿ ಯಾವುದೇ ಆರ್ಥಿಕ ನಷ್ಟ ಉಂಟಾಗಿರುವುದು ಕಂಡುಬಂದಿರುವುದಿಲ್ಲವೆಂದು ತಿಳಸಿರುತ್ತಾರೆ.
5. ಶ್ರೀ ಭೀಮಪ್ಪ ಮಾಯಪ್ಪ ಪುಗಶೆಟ್ಟಿ ಇವರ ಗುಡಿಹಳ್ಳದ ಹತ್ತಿರ ಚೆಕ್ ಡ್ಯಾಂ ಪುನಶ್ಚೇಚನಗೊಳಸುವ ಕಾಮಗಾರಿಯು ಅಳತೆ ಪುಸ್ತಕದಲ್ಲಿ ತೋರಿಸಿರುವ ಅಳತೆಗಿಂತ ಕೈಗೊಂಡಿರುವ ಕಾಮಗಾರಿಯ ಪರಿಮಾಣವು ಹೆಚ್ಚಾಗಿರುತ್ತದೆ ಎಂದು ತಿಳಸಿರುತ್ತಾರೆ.

ಮೇಲಿನ ಆರ್ಥಿಕ ಅವ್ಯವಹಾರ / ದುರುಪಯೋಗಕ್ಕೆ ಈ ಕೆಳಕಂಡ 3 ಜನ ಆಪಾದಿತರು ಜವಾಬ್ದಾರರಾಗಿರುತ್ತಾರೆಂದು ತಿಳಸಿರುತ್ತಾರೆ:-

1. ಶ್ರೀಮತಿ ಗೀತಾ ಬಸಪ್ಪ ಗಂಗರೆಡ್ಡಿ, ಅಧ್ಯಕ್ಷರು, ಸುಣದೋಳ ಗ್ರಾಮ ಪಂಚಾಯತಿ.
2. ಶ್ರೀ ಸಂಗಪ್ಪ ಶಿವನಪ್ಪ ರೊಡ್ಡಣ್ಣವರ್, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಸುಣದೋಳ ಗ್ರಾಮ ಪಂಚಾಯತಿ.
3. ಶ್ರೀ ಎಂ.ಆರ್.ಕುಲಕರ್ಣಿ, ಸಹಾಯಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಗೋಕಾಕ್.

ಸದರಿ ತನಿಖಾ ವರದಿಗೆ ಸಂಬಂಧಿಸಿದಂತೆ ಲೋಕಾಯುಕ್ತ ಕಚೇರಿಯು ಆಪಾದಿತರುಗಳಂದ ಪಡೆಯಲಾಗಿರುವ ಆಕ್ಷೇಪಣೆಗಳಲ್ಲಿ ಅವರುಗಳು ನಿರ್ವಹಿಸಲಾದ ಕಾಮಗಾರಿಗಳಲ್ಲಿ ಯಾವುದೇ ಹಣ ದುರುಪಯೋಗವಾಗಿಲ್ಲವೆಂದು ಹೇಳಕೆ ಸಲ್ಲಿಸಿರುತ್ತಾರೆಂದು ತಿಳಸಿರುತ್ತಾರೆ.

ಮಾನ್ಯ ಉಪ ಲೋಕಾಯುಕ್ತರವರು ತನಿಖಾ ವರದಿ, ಆಪಾದಿತರು ಸಲ್ಲಿಸಿರುವ ಆಕ್ಷೇಪಣೆಗಳು ಮತ್ತು ದಾಖಲಾತಿಗಳನ್ನು ಪರಿಶೀಲಿಸಿದ್ದು, 2013-14ನೇ ಸಾಲಿನ ನರೇಗಾ ಯೋಜನೆಯಡಿಯಲ್ಲಿ ಕೈಗೊಳ್ಳಲಾದ ಹೊನಕುಪ್ಪಿ ಗ್ರಾಮದ ಸರ್ಕಾರಿ ಗಂಡು ಮಕ್ಕಳ ಶಾಲೆಯ ಆವರಣ ಸಮತಟ್ಟು ಮಾಡುವ ಕಾಮಗಾರಿಗೆ ಸಂಬಂಧಿಸಿದ ಅಂದಾಜು ಪಟ್ಟಿಯಲ್ಲಿ ಶ್ರೀ ಸಂಗಪ್ಪ ಶಿವನಪ್ಪ ರೊಡ್ಡಣ್ಣವರ್, ಪಂಚಾಯತ್ ಅಭಿವೃದ್ಧಿ ಅಧಿಕಾರಿ ಇವರ ಸೀಲು ಮತ್ತು ಸಹಿ ಇಲ್ಲದೇ ಇರುವುದು ಕಂಡುಬಂದಿದೆಯೆಂದು, ಈ ಕಾಮಗಾರಿಯ ಅಂದಾಜು ಪಟ್ಟಿಯಲ್ಲಿರುವ ಅಳತೆಗೂ ಅಳತೆ ಪುಸ್ತಕದಲ್ಲಿರುವ ಅಳತೆಗೂ ವ್ಯತ್ಯಾಸವಿದ್ದು, ರೂ. 14,144/-ಗಳನ್ನು ಹೆಚ್ಚುವರಿಯಾಗಿ ಪಾವತಿಸಿರುವುದು ಕಂಡುಬಂದಿದೆಯೆಂದು, ಹೊನಕುಪ್ಪಿ ಗ್ರಾಮದ ಶ್ರೀ ಲಕ್ಷ್ಮಣ ಅಲಕನೂರ ತೋಟದ ಹತ್ತಿರ ಕೆರೆ ಪುನಶ್ಚೇತನಗೊಳಿಸುವ ಕಾಮಗಾರಿ, ಶ್ರೀ ಭೀಮಪ್ಪ ಮಾಯಪ್ಪ ಪುಗಶೆಟ್ಟಿ ಇವರ ಗುಡಿಹಳ್ಳ ಹತ್ತಿರ ಚೆಕ್ ಡ್ಯಾಂ ಅನ್ನು ಪುನಶ್ಚೇತನಗೊಳಿಸುವ ಕಾಮಗಾರಿ, ಸರ್ಕಾರಿ ಕನ್ನಡ ಶಾಲೆಯ ಭೀಮ ಪುಗಶೆಟ್ಟಿ ಹೊಲದ ಹತ್ತಿರದ ಗುಡಿ ಹಳ್ಳದ ಚೆಕ್ ಡ್ಯಾಂ ಪುನಶ್ಚೇತನಗೊಳಿಸುವ ಕಾಮಗಾರಿ ಹಾಗೂ ಸರ್ಕಾರಿ ಗಂಡು ಮಕ್ಕಳ ಶಾಲೆಯ ಮೈದಾನ ಅಭಿವೃದ್ಧಿ ಕಾಮಗಾರಿಗಳಿಗೆ ಸಂಬಂಧಿಸಿದ ಅಂದಾಜು ಪಟ್ಟಿಗಳಲ್ಲಿರುವ ಅಳತೆಗೆ ಹಾಗೂ ಅಳತೆ ಪುಸ್ತಕಗಳಲ್ಲಿ ದಾಖಲಿಸಿರುವ ಅಳತೆಗೂ ಹೋಲಿಕೆಯಾಗುತ್ತಿಲ್ಲವೆಂದು ಹಾಗೂ ಅಳತೆಯನ್ನು ಯಾವ ದಿನದಂದು ಮಾಡಲಾಗಿದೆ ಎಂದು ನಮೂದಾಗಿರುವುದಿಲ್ಲವೆಂದು, ಇದಲ್ಲದೇ ಅಳತೆ ಪುಸ್ತಕದಲ್ಲಿ ದಾಖಲಿಸಿರುವ ಅಳತೆಯಲ್ಲಿ ತಿದ್ದುಪಡಿಗಳಾಗಿರುವುದು ಸಹ ಕಂಡು ಬಂದಿರುತ್ತದೆಯೆಂದು, ಹಾಗಾಗಿ ಆಪಾದಿತರು ಕರ್ತವ್ಯಲೋಪವೆಸಗಿ ಹಣ ದುರುಪಯೋಗಪಡಿಸಿಕೊಂಡಿರುವುದು ಮೇಲ್ನೋಟಕ್ಕೆ ಕಂಡುಬರುತ್ತದೆಯೆಂದು, ಸದರಿಯವರುಗಳು ಸಾರ್ವಜನಿಕ / ಸರ್ಕಾರಿ ನೌಕರರಾಗಿ ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠೆ ತೋರದೆ, ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ಕರ್ತವ್ಯ ಲೋಪ ಎಸಗಿ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966ರ 3(1)ನ್ನು ಉಲ್ಲಂಘಿಸಿ ದುರ್ನಡತೆಯನ್ನು ಎಸಗಿರುವುದರಿಂದ ಈ ಕೆಳಕಂಡವರ ವಿರುದ್ಧ ಶಿಸ್ತು ನಡವಳಿಕೆ ಕ್ರಮ ಜರುಗಿಸಲು ಮತ್ತು ಹಾಗೆಯೇ ಇಲಾಖಾ ವಿಚಾರಣೆಯನ್ನು ನಡೆಸುವ ಸಲುವಾಗಿ ಪ್ರಕರಣವನ್ನು ತಮಗೆ ವಹಿಸುವಂತೆ ಮಾನ್ಯ ಉಪ ಲೋಕಾಯುಕ್ತರವರು ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ:-

1. ಶ್ರೀಮತಿ ಗೀತಾ ಬಸಪ್ಪ ಗಂಗರೆಡ್ಡಿ, ಅಧ್ಯಕ್ಷರು, ಸುಣದೋಳ ಗ್ರಾಮ ಪಂಚಾಯತಿ.
2. ಶ್ರೀ ಸಂಗಪ್ಪ ಶಿವನಪ್ಪ ರೊಡ್ಡಣ್ಣವರ್, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಸುಣದೋಳ ಗ್ರಾಮ ಪಂಚಾಯತಿ.
3. ಶ್ರೀ ಎಂ.ಆರ್.ಕುಲಕರ್ಣಿ, ಸಹಾಯಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಗೋಕಾಕ್.

ಸರ್ಕಾರವು ಪ್ರಕರಣಕ್ಕೆ ಸಂಬಂಧಿಸಿದ ಎಲ್ಲಾ ಮಾಹಿತಿ / ದಾಖಲಗೆಗಳನ್ನು ಪರಿಶೀಲಿಸಿದೆ. ಪ್ರಕರಣದಲ್ಲಿ ಭಾಗಿಯಾಗಿರುವ ಆಪಾದಿತರು ಪ್ರಶ್ನಿತ ಕಾಮಗಾರಿಗಳನ್ನು ಮಂಜೂರಾದ ಅಂದಾಜಿನಂತೆ ನಿರ್ವಹಿಸಿಲ್ಲದಿರುವುದು, ಅಂದಾಜು ಪಟ್ಟಿಯಲ್ಲಿ ಸೀಲು ಮತ್ತು ಸಹಿ ಇಲ್ಲದಿರುವುದು, ಕಾಮಗಾರಿಯ ಅಳತೆಗಳನ್ನು ಯಾವ ದಿನಾಂಕದಂದು ದಾಖಲಿಸಿರುತ್ತಾರೆ ಎಂಬುದನ್ನು ನಮೂದಿಸದೇ ಇರುವುದು ಹಾಗೂ ಅಂದಾಜು ಪಟ್ಟಿಯಲ್ಲಿನ ಅಳತೆಗೂ ಮತ್ತು ಅಳತೆ ಪುಸ್ತಕದಲ್ಲಿನ ಅಳತೆಗೂ ವ್ಯತ್ಯಾಸವಿದ್ದು ಕರ್ತವ್ಯಲೋಪ ಹಾಗೂ ಹಣ ದುರುಪಯೋಗಪಡಿಸಿಕೊಂಡಿರುವುದು ದಾಖಲೆಗಳಿಂದ ಮೇಲ್ನೋಟಕ್ಕೆ ಕಂಡುಬರುತ್ತದೆ. ಆದ್ದರಿಂದ ಸದರಿ ಆಪಾದಿತರು ಸರ್ಕಾರಿ ನೌಕರರಾಗಿ ತಮ್ಮ ಕರ್ತವ್ಯ ನಿರ್ವಹಣೆಯಲ್ಲಿ ಪರಿಪೂರ್ಣ ಪ್ರಾಮಾಣಿಕತೆ ಹಾಗೂ ಸಂಪೂರ್ಣ ನಿಷ್ಠೆ ತೋರದೆ ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ

ನಡೆದುಕೊಂಡು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966ರ 3(1) (i) (ii) & (iii) ನ್ನು ಉಲ್ಲಂಘಿಸಿ ದುರ್ನಡತೆಯನ್ನು ಎಸಗಿ ಹಣ ದುರುಪಯೋಗ ಪಡಿಸಿಕೊಂಡಿರುವುದು ಮೇಲ್ನೋಟಕ್ಕೆ ಕಂಡು ಬರುವುದರಿಂದ ಅವರುಗಳ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳುವುದು ಅವಶ್ಯವೆಂದು ಕಂಡುಬರುತ್ತದೆ.

ಆದ್ದರಿಂದ, ಶ್ರೀಮತಿ ಗೀತಾ ಬಸಪ್ಪ ಗಂಗರೆಡ್ಡಿ, ಅಧ್ಯಕ್ಷರು, ಸುಣದೋಳ ಗ್ರಾಮ ಪಂಚಾಯತಿ ಇವರು ಎಸಗಿರುವ ಅವ್ಯವಹಾರಗಳಿಗೆ ಸಂಬಂಧಿಸಿದಂತೆ ಸದರಿಯವರ ವಿರುದ್ಧ ಕರ್ನಾಟಕ ಪಂಚಾಯತ್ ರಾಜ್ ಕಾಯ್ದೆಯಡಿ ಸೂಕ್ತ ಕ್ರಮ ಜರುಗಿಸುವಂತೆ ಸಕ್ಷಮ ಪ್ರಾಧಿಕಾರವಾದ ನಿರ್ದೇಶಕರು (ಪಂ.ರಾಜ್), ಗ್ರಾ.ಅ.ಪಂ.ರಾಜ್ ಇವರಿಗೆ ತಿಳಿಸಲು ಹಾಗೂ ಈ ಕೆಳಕಂಡ ಇಬ್ಬರು ಆಪಾದಿತರ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದಂತೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳ ನಿಯಮ 11ರಂತೆ ಇಲಾಖಾ ವಿಚಾರಣೆ ನಡೆಸುವ ಸಲುವಾಗಿ ಪ್ರಕರಣವನ್ನು ಮಾನ್ಯ ಉಪ ಲೋಕಾಯುಕ್ತರವರಿಗೆ ವಹಿಸಲು ಸರ್ಕಾರವು ತೀರ್ಮಾನಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**<u>ಆದೇಶ ಸಂಖ್ಯೆ : ಗ್ರಾಅಪ 174 ಇಎನ್‌ಕ್ಯೂ 2016 ಬೆಂಗಳೂರು,</u>**
**<u>ದಿನಾಂಕ. 18.01.2017</u>**

ಪಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರವು ಈ ಕೆಳಕಂಡ ಅಧಿಕಾರಿಗಳ ವಿರುದ್ಧದ ಆರೋಪಗಳ ಬಗ್ಗೆ ವಿವರವಾದ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11ರಂತೆ ನಡೆಸುವ ಸಲುವಾಗಿ ಪ್ರಕರಣವನ್ನು ಸದರಿ ನಿಯಮಗಳ ನಿಯಮ 14(ಎ)ರ ಅನುಸಾರ ಮಾನ್ಯ ಉಪಲೋಕಾಯುಕ್ತರವರಿಗೆ ವಹಿಸಿ ಆದೇಶಿಸಿದೆ:-

1. ಶ್ರೀ ಸಂಗಪ್ಪ ಶಿವನಪ್ಪ ರೊಡ್ಡಣ್ಣವರ್, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಸುಣದೋಳ ಗ್ರಾಮ ಪಂಚಾಯತಿ.
2. ಶ್ರೀ ಎಂ.ಆರ್.ಕುಲಕರ್ಣಿ, ಸಹಾಯಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಗೋಕಾಕ್.

ಪ್ರಕರಣದಲ್ಲಿ ಭಾಗಿಯಾಗಿರುವ ಮತ್ತೊಬ್ಬ ಆಪಾದಿತರಾದ ಶ್ರೀಮತಿ ಗೀತಾ ಬಸಪ್ಪ ಗಂಗರೆಡ್ಡಿ, ಅಧ್ಯಕ್ಷರು, ಸುಣದೋಳ ಗ್ರಾಮ ಪಂಚಾಯತಿ ಇವರು ಎಸಗಿರುವ ಅವ್ಯವಹಾರಗಳಿಗೆ ಸಂಬಂಧಿಸಿದಂತೆ ಸದರಿಯವರ ವಿರುದ್ಧ ಕರ್ನಾಟಕ ಪಂಚಾಯತ್ ರಾಜ್ ಕಾಯ್ದೆಯಡಿ ಸೂಕ್ತ ಕ್ರಮ ಜರುಗಿಸುವಂತೆ ಸಕ್ಷಮ ಪ್ರಾಧಿಕಾರವಾದ ನಿರ್ದೇಶಕರು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರಿಗೆ ಸೂಚಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಸಿದ್ದೇಶ್ ಪೊತಲಕಟ್ಟಿ)
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**<u>ಇವರಿಗೆ:</u>**

1. ಮಹಾಲೇಖಪಾಲರು, (ಅ ಮತ್ತು ಇ) ಕರ್ನಾಟಕ, ಬೆಂಗಳೂರು.

2. ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಚೇರಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಸರ್ಕಾರದ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ.
4. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
5. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ದಕ್ಷಿಣ), ಬೆಂಗಳೂರು.
6. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬೆಳಗಾವಿ.
7. ಸಂಬಂಧಪಟ್ಟ ಆಪಾದಿತ ಅಧಿಕಾರಿಗಳಿಗೆ – ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬೆಳಗಾವಿ ಇವರ ಮುಖಾಂತರ.
8. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
9. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ (ಸೇವೆಗಳು–ಬಿ&ಸಿ).
10. ಸರ್ಕಾರದ ಅಧೀನ ಕಾರ್ಯದರ್ಶಿ, ಗ್ರಾಮ ಪಂಚಾಯತ್ ಶಾಖೆ, ಗ್ರಾ.ಅ.ಪಂ.ರಾಜ್ ಇಲಾಖೆ.
11. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ / ಅಪರ ಕಾರ್ಯದರ್ಶಿ (ಆಡಳಿತ) ಇವರ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರು.
12. ಹೆಚ್ಚುವರಿ ಪ್ರತಿ : ರಕ್ಷಾ ಕಡತ : ಕಂಪ್ಯೂಟರ್ ಸೆಲ್.